



ಅರುಣ ಪಿ. ಭಟ್ಟ


## ವಾರಭವಿಷ್ಯ: 04.09.2025ರಿಂದ 10.09.2025ರವರೆಗೆ




ಉದ್ಯೋಗಿಗಳಿಗೆ ವಾರದ ಶುರುವಿನಲ್ಲಿ ಉತ್ತಮ ಯಶಸ್ಸು ದೊರೆಯುತ್ತದೆ. ಸಾಮಾಜಿಕವಾಗಿ ಜನಪ್ರಿಯತೆ ಹೆಚ್ಚಾಗಲಿದೆ. ಸಾರ್ವಜನಿಕ ಜೀವನದಲ್ಲಿ ಇರುವವರು ಕೆಲ ಸವಾಲುಗಳನ್ನು ಸ್ವೀಕರಿಸಲಿದ್ದೀರಿ. ಪ್ರವಾಸ ಮಾಡುವ ಸಾಧ್ಯತೆ ಇದೆ. ಹೊಸ ಕೆಲಸಗಳನ್ನು ಮಾಡಲು ಮನಸ್ಸು ಮಾಡುತ್ತೀರಿ. ದೀರ್ಘಾವಧಿ ಆರೋಗ್ಯ ಸಮಸ್ಯೆಗಳಿಗೆ ಪರಿಹಾರ ದೊರಕುತ್ತದೆ. ಶುಭದಿನ: 06. ನವದುರ್ಗಾ ಆರಾಧನೆ ಮಾಡಿರಿ.




ಮೇಲಧಿಕಾರಿಗಳ ಜತೆಗೆ ಉತ್ತಮ ಬಾಂಧವ್ಯ ಇರುತ್ತದೆ. ಕುಟುಂಬದಲ್ಲಿ ಸಂತಸ ಇರುತ್ತದೆ. ಕಾನೂನು ವಿಚಾರಗಳಲ್ಲಿ ಮೇಲುಗೈ ಸಾಧಿಸುತ್ತೀರಿ. ಆರೋಗ್ಯ ಸಮಸ್ಯೆಗಳು ಇದ್ದಲ್ಲಿ ಅದಕ್ಕೆ ಸೂಕ್ತ ಚಿಕಿತ್ಸೆಯನ್ನು ಪಡೆದುಕೊಳ್ಳಿ. ವಾರದ ಮಧ್ಯ ಭಾಗದಲ್ಲಿ ಸಕಾರಾತ್ಮಕ ಬೆಳವಣಿಗೆ ಕಾಣುವ ಯೋಗ ಇದೆ. ಈ ವಾರ ಮಿಶ್ರ ಫಲಿತಾಂಶ ಕಾಣುತ್ತೀರಿ. ಶುಭದಿನ: 08. ಹನುಮಾನ್ ಚಾಲೀಸ್ ಪಠಿಸಿರಿ





ವೈವಾಹಿಕ ಜೀವನ ಸಂತೋಷವಾಗಿರುತ್ತದೆ. ಮನಸ್ತಾಪಗಳು ನಿವಾರಣೆ ಆಗುತ್ತವೆ. ಕಾನೂನು ವ್ಯಾಜ್ಯಗಳಲ್ಲಿ ಗೊಂದಲ ಏರ್ಪಡುತ್ತದೆ. ಆರ್ಥಿಕ ವಿಚಾರದಲ್ಲಿ ಉತ್ತಮ ಲಾಭವನ್ನು ಕಾಣಲಿದ್ದೀರಿ. ಕೆಲಸದಲ್ಲಿ ಯಶಸ್ಸು ಪಡೆಯಲಿದ್ದೀರಿ. ವ್ಯವಹಾರಗಳಲ್ಲಿ, ಸಮಸ್ಯೆಗಳಾಗಿದ್ದಲ್ಲಿ ಅವುಗಳು ನಿವಾರಣೆಯಾಗುತ್ತವೆ. ವಿವಿಧ ಸಮಾಜ ಸೇವೆ ಕಾರ್ಯಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ಶುಭದಿನ: 05. ಸೌಂದರ್ಯಲಹರಿ ಪಠಿಸಿರಿ.





ನಿಮ್ಮ ವೃತ್ತಿಪರ ಬೆಳವಣಿಗೆಯನ್ನು ಸಂಬಂಧಿಕರು ಹೊಗಳಲಿದ್ದಾರೆ. ಸಾಲ ಮರುಪಾವತಿ ಮಾಡಲು ಸಾಧ್ಯವಾಗುತ್ತದೆ. ಪ್ರೀತಿ ಪಾತ್ರರಿಗೆ ಪ್ರಾಶಸ್ತ್ಯ ನೀಡಲಿದ್ದೀರಿ. ದೊಡ್ಡ ಮೊತ್ತದ ಹಣದ ಸಂಗ್ರಹ ಮಾಡಲಿದ್ದೀರಿ. ಆತ್ಮವಿಶ್ವಾಸ ಹೆಚ್ಚಾಗಲಿದ್ದು, ಸಕಾರಾತ್ಮಕವಾದ ಬೆಳವಣಿಗೆ ಆಗಲಿದೆ. ಅಧಿಕಾರ ಸ್ಥಾನದಲ್ಲಿ ಇರುವವರಿಗೆ ತಮ್ಮ ವೃತ್ತಿಪರ ಕೆಲಸಕ್ಕೆ ಮೆಚ್ಚುಗೆ ಸಿಗಲಿದೆ. ಶುಭದಿನ: 07. ಲಿಂಗಾಷ್ಟಕ ಪಠಿಸಿರಿ.




ವರ್ಚಸ್ಸು ಹೆಚ್ಚಲಿದೆ. ಬಡ್ತಿ ನಿರೀಕ್ಷೆ ಇದ್ದವರು ಶುಭ ಸುದ್ದಿಯನ್ನು ಕೇಳಲಿದ್ದೀರಿ. ಉದ್ಯೋಗಕ್ಕೆ ಪ್ರಯತ್ನ ಮಾಡುತ್ತಿರುವವರು ಇನ್ನೂ ಹೆಚ್ಚಿನ ಶ್ರಮ ಹಾಕಬೇಕು. ಪ್ರೀತಿಪಾತ್ರರ ಜತೆ ಬಂಧ ಗಟ್ಟಿಯಾಗಲಿದೆ. ನೀವು ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ಆದಾಯ ಹೆಚ್ಚಾಗುತ್ತಾ ಸಾಗುತ್ತದೆ. ವಿದೇಶ ವ್ಯವಹಾರ ಹಾಗೂ ಹೂಡಿಕೆಯಲ್ಲಿ ಲಾಭ ಪಡೆಯಲಿದ್ದೀರಿ. ಶುಭದಿನ: 06. ಗಣಪತಿಗೆ ದೂರ್ವಾರ್ಚನೆ ಮಾಡಿರಿ.





ವಾರದ ಆರಂಭದಲ್ಲಿ ಭೂ ವಿಚಾರದಲ್ಲಿ ಲಾಭ ಆಗಲಿದೆ. ಉದ್ಯೋಗದಲ್ಲಿ ಬಡ್ತಿ. ಮನೆಯಲ್ಲಿ ಸಕಾರಾತ್ಮಕ ವಾತಾವರಣ ಇರಲಿದೆ. ಆರೋಗ್ಯ ಉತ್ತಮವಾಗಿ ಇರಲಿದೆ. ವೃತ್ತಿಪರರ ಶೈಕ್ಷಣಿಕ ಸಾಧನೆಗೆ ಮನ್ನಣೆ ಸಿಗಲಿದೆ. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ಇರುವವರು ವಾರದ ಮಧ್ಯ ಭಾಗದಲ್ಲಿ ಶುಭ ಸುದ್ದಿಯನ್ನು ಕೇಳಲಿದ್ದೀರಿ. ವೈಯಕ್ತಿಕ ಸಂಬಂಧದಲ್ಲಿ ಉತ್ತಮ ಗೌರವ ಇರಲಿದೆ. ಶುಭದಿನ: 10.ಕಾಲಭೈರವನ ಸೇವೆ ಮಾಡಿರಿ.





ವೃತ್ತಿಯಲ್ಲಿ ಏಳ್ಗೆ, ಪ್ರಗತಿ ಕಾಣಲಿದ್ದೀರಿ. ಮಾಹಿತಿ ತಂತ್ರಜ್ಞಾನವನ್ನು ಸಮರ್ಥವಾಗಿ ಬಳಕೆ ಮಾಡಿಕೊಳ್ಳಲಿದ್ದೀರಿ. ಕುಟುಂಬ ಸದಸ್ಯರ ಜತೆಗೆ ಉತ್ತಮ ಬಾಂಧವ್ಯ ಏರ್ಪಡಲಿದೆ. ಕೋರ್ಟ್ ಪ್ರಕರಣಗಳು ನಡೆಯುತ್ತಿದ್ದಲ್ಲಿ ನಿಮ್ಮ ಪರವಾದ ವಾದಕ್ಕೆ ಪುಷ್ಟಿ ದೊರೆಯಲಿದೆ. ಆಹಾರ ನೀರಿನ ಸೇವನೆಯಲ್ಲಿ ಎಚ್ಚರಿಕೆಯಿಂದ ಇರಬೇಕು. ಹಳೆ ನೋವುಗಳಿಂದ ಮುಕ್ತಿ ದೊರೆಯಲಿದೆ. ಶುಭದಿನ: 09. ವಿಷ್ಣು ಸಹಸ್ರನಾಮ ಪಠಿಸಿರಿ.





ಪಿತ್ರಾರ್ಜಿತ ಆಸ್ತಿಯಲ್ಲಿ ನಾನಾ ಬಗೆಯ ಬಿಕ್ಕಟ್ಟುಗಳು ಕಾಣಿಸಿಕೊಳ್ಳಬಹುದು. ಮನೆಯಲ್ಲಿ ಶುಭ ಕಾರ್ಯಗಳನ್ನು ಆಯೋಜಿಸಲಿದ್ದೀರಿ. ಕಂಪನಿಯೊಂದರ ಜತೆಗೆ ಒಪ್ಪಂದ ಮಾಡಿಕೊಳ್ಳುವ ಸಾಧ್ಯತೆ ಇದೆ. ಆರೋಗ್ಯ ವಿಚಾರದಲ್ಲಿ ಬಹಳ ಎಚ್ಚರಿಕೆಯಿಂದ ಇರಬೇಕು. ಸಂಸಾರದಲ್ಲಿ ಉತ್ತಮ ಬಾಂಧವ್ಯ ಇರುತ್ತದೆ. ವೈಯಕ್ತಿಕ ಕೆಲಸಗಳಿಗಾಗಿ ಪ್ರಯಾಣ ಮಾಡುತ್ತೀರಿ. ಶುಭದಿನ: 06. ಈಶ್ವರನಿಗೆ ರುದ್ರಾಭಿಷೇಕ ಮಾಡಿರಿ.





ವಾರದ ಆರಂಭದಲ್ಲೇ ಶುಭ ಸುದ್ದಿ ಕೇಳಲಿದ್ದೀರಿ. ಆರೋಗ್ಯವು ಉತ್ತಮವಾಗಿರಲಿದೆ. ದೈಹಿಕ ಸಮಸ್ಯೆಗಳು ನಿವಾರಣೆಯಾಗಲಿವೆ. ಆತ್ಮವಿಶ್ವಾಸ–ಸಕಾರಾತ್ಮಕ ಆಲೋಚನೆ ವೃದ್ಧಿಯಾಗಲಿದೆ. ದೈನಂದಿನ ವ್ಯವಹಾರಗಳಲ್ಲಿ ಯಾವುದೇ ಬದಲಾವಣೆ ಮಾಡಿಕೊಳ್ಳದೆ ಮುಂದುವರಿಯಿರಿ. ಹಣಕಾಸಿನ ಅನುಕೂಲ ಆಗಲಿದೆ. ವೈವಾಹಿಕವಾಗಿ ಸಂತೋಷದಿಂದ ಇರುತ್ತೀರಿ. ಶುಭದಿನ: 07. ಸುಬ್ರಹ್ಮಣ್ಯ ಜಪ, ಗೋಪೂಜೆ ಮಾಡಿರಿ.




ಹಣಕಾಸು ಹೂಡಿಕೆ ಮಾಡಿದ್ದನ್ನು ಈಗ ಬಳಸಿಕೊಳ್ಳಲು ಮುಂದಾಗಲಿದ್ದೀರಿ. ಕೋರ್ಟ್ ವ್ಯವಹಾರ ನಿಮ್ಮ ಪರವಾಗಿ ಆಗುವ ಸಾಧ್ಯತೆ ಇದೆ. ಭವಿಷ್ಯದ ನಿಮ್ಮ ಗುರಿಯನ್ನು ನಿರ್ಧರಿಸುವ ಕಡೆಗೆ ಗಮನ ಕೇಂದ್ರೀಕರಿಸುತ್ತೀರಿ. ಸಹೋದ್ಯೋಗಿಗಳ ಜತೆ ಮುಖ್ಯವಾದ ಚರ್ಚೆ ನಡೆಸಲಿದ್ದೀರಿ. ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ನಿರೀಕ್ಷಿತ ಫಲಿತಾಂಶ. ಶುಭದಿನ: 06. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಆರ್ಥಿಕವಾಗಿ ಪ್ರಗತಿ ಸಾಧಿಸಲು ಉತ್ತಮ ಅವಕಾಶಗಳಿವೆ. ಪ್ರಯತ್ನಿಸಲು ಸೂಕ್ತ ಸಮಯ ಇದು. ಬೌದ್ಧಿಕ ಮತ್ತು ದೈಹಿಕ ಸಾಮರ್ಥ್ಯ ವೃದ್ಧಿ ಆಗಲಿದೆ. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ಅದೃಷ್ಟ ಪರೀಕ್ಷೆ ಮಾಡಬಹುದು. ನಿಮ್ಮ ಶ್ರಮಕ್ಕೆ ಯಶಸ್ಸು ದೊರೆಯುವ ಅವಕಾಶ ಹೆಚ್ಚಾಗಿದೆ. ಸಂತಾನ ಅಪೇಕ್ಷಿತರಿಗೆ ಶುಭ ಸುದ್ದಿ ಸಿಗಲಿದೆ. ಕುಟುಂಬ ಸಮೇತ ಪ್ರಯಾಣ ಮಾಡುವ ಸಾಧ್ಯತೆಗಳಿವೆ. ಶುಭದಿನ: 04. ಕನಕಧಾರಾ ಸ್ತೋತ್ರ ಪಠಿಸಿರಿ.




ಪರಿಶ್ರಮಕ್ಕೆ ತಕ್ಕಂತೆ ಫಲಿತಾಂಶ ದೊರೆಯಲಿದೆ. ಉದ್ಯೋಗ ಸಂದರ್ಶನದಲ್ಲಿ ನಿಮ್ಮ ಪಾಲಿಗೆ ಯಶಸ್ಸು ಸಿಗಲಿದೆ. ನಿಮ್ಮ ಒಳ್ಳೆಯ ಕೆಲಸಕ್ಕೆ ಮೆಚ್ಚುಗೆ, ಮನ್ನಣೆ ಲಭಿಸಲಿವೆ. ಕೌಟುಂಬಿಕ ಜೀವನ ಆರಾಮವಾಗಿ ಇರುತ್ತದೆ. ನಿಮ್ಮ ಯಶಸ್ಸು ಕಂಡು ಪೋಷಕರು ಸಂತೋಷ ಪಡುತ್ತಾರೆ. ಕೌಟುಂಬಿಕ ಜೀವನದಲ್ಲಿ ನೀವು ಕಾಣಬಯಸಿದ್ದ ಯಶಸ್ಸು ಪಡೆಯುತ್ತೀರಿ. ಶುಭದಿನ: 06.ಚಂಡಿ ಪಾರಾಯಣ ಮಾಡಿರಿ.